ಭಾಗ–2

(ಅನುಬಂಧ–1)

ಶ್ರೀ ಸಿ.ಬಿ. ಕೃಷ್ಣ ಬೈರೇಗೌಡ : ಮಾನ್ಯ ಅಧ್ಯಕ್ಷರೆ, Written questionsಗೆ reply ಬಂದಿಲ್ಲ.

ಅಧ್ಯಕ್ಷರು : ಯಾವುದು ?

ಶ್ರೀ ಸಿ.ಬಿ. ಕೃಷ್ಣ ಬೈರೇಗೌಡ : Unstanred Questionsದು.

ಶ್ರೀ ಸಿದ್ದರಾಮಯ್ಯ : ಇಲ್ಲಾ ನಿಮ್ಮಿಂದ ಉತ್ತರವೇ ಬಂದಿಲ್ಲವೆಂದು ಮಾನ್ಯ ಸದಸ್ಯರು ಕೇಳುತ್ತಿದ್ದಾರೆ.

ಶ್ರೀ ಕೆ. ಸುರೇಶ್ ಗೌಡ : ನಿನ್ನೆದು ಮತ್ತು ಯಾವುದಕ್ಕೂ ಸಹ ಉತ್ತರ ಬಂದಿಲ್ಲ.

ಶ್ರೀ ಎಸ್. ಸುರೇಶ್ ಕುಮಾರ್ : ಈಗ ಮಾಡುತ್ತಿದ್ದಾರೆ.

ಅಧ್ಯಕ್ಷರು : ಈಗ ಕೊಡುತ್ತಿದ್ದಾರೆ. ಈಗ ಚುನಾವಣಾ ಪ್ರಸ್ತಾವ.

2. ಚುನಾವಣಾ ಪ್ರಸ್ತಾವ:

ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ನಗರಾಭಿವೃದ್ಧಿ ಸಚಿವರು) : ಮಾನ್ಯ ಸಭಾಧ್ಯಕ್ಷರೆ, 1994ನೇ ಇಸವಿಯ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 21ನೇ ಕಲಂನ ಮೇರೆಗೆ ಅವಶ್ಯಪಡಿಸುವಂತೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್‌ಗೆ ಮೂರು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು. ಈಗ ವರದಿಯನ್ನೊಪ್ಪಿಸುವುದು.

ಶ್ರೀ ಸಿದ್ದರಾಮಯ್ಯ : ಮಾನ್ಯ ಅಧ್ಯಕ್ಷರೆ, ಒಂದು ನಿಮಿಷ. ನಾಲ್ಕು ಪ್ರಶ್ನೆಗಳನ್ನು ಕೇಳಿರುವ ಪೈಕಿ ಎರಡು ಪ್ರಶ್ನೆಗಳಿಗೆ ಉತ್ತರ ಬಂದಿದೆ. ಇನ್ನುಳಿದ ಎರಡು ಪ್ರಶ್ನೆಗಳಿಗೆ ಉತ್ತರವನ್ನು ಕಳುಹಿಸಿಲ್ಲ. ಲಿಖಿತ ಮೂಲಕ ಉತ್ತರಿಸುವಂತಹ ಪ್ರಶ್ನೆಗಳಿಗೂ ಸಹ ಉತ್ತರವನ್ನು ಕಳುಹಿಸುವುದಿಲ್ಲವೆಂದರೆ ಹೇಗೆ? ಏತಕ್ಕಾಗಿ ಹೀಗೆ ಆಗುತ್ತದೆ?